**ಓ.ಎಸ್. ನಂ.  138/2023**                                                                                    **ಪಿ.ಡಬ್ಲ್ಯೂ- 1**

**ಸಾಕ್ಷಿಯನ್ನು ದಿನಾಂಕ  20.3.2024 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

ಮುಖ್ಯ ವಿಚಾರಣೆಃ ವಾದಿ ಪರ ವಕೀಲರಿಂದಃ

ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದು, ಅದರಲ್ಲಿರುವ ಅಂಶಗಳು ಸತ್ಯವಾಗಿದ್ದು, ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ. ನಾನು ಹಲವು ದಾಖಲೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಈಗ ನೋಡಿ ಗುರುತಿಸುತ್ತಿದ್ದೇನೆ.  ದಿನಾಂಕ 5.8.2022 ರ ನೋಂದಾಯಿತ ಕ್ರಯದ ಕರಾರುಪತ್ರವನ್ನು ನಿಪಿ1 ಎಂದು, ದಿನಾಂಕ 8.1.2023 ರಂದು ಪ್ರತಿವಾದಿಗೆ ವಕೀಲರ ಮೂಲಕ ನೀಡಿರುವ ನೋಟಿಸಿನ ಕಛೇರಿ ಪ್ರತಿಯನ್ನು ನಿಪಿ2 ಎಂದು, ಅಂಚೆ ರಶೀದಿಯನ್ನು ನಿಪಿ3 ಎಂದು, ಸದರಿ ನೋಟಿಸನ್ನು ಪ್ರತಿವಾದಿಯು ಸ್ವೀಕರಿಸದೇ ವಾಪಸ್ ಬಂದಿದ್ದು, ಅಂಚೆ ಕವರನ್ನು ತೆರೆದ ನ್ಯಾಯಾಲಯದಲ್ಲಿ ತೆರೆದು ನೋಡಲಾಗಿ ಅಂಚೆ ಕವರನ್ನು ನಿಪಿ4 ಎಂದು, ಅದರಲ್ಲಿರುವ ನೋಟಿಸ್ ಪ್ರತಿಯನ್ನು ನಿಪಿ4 ಎ ಎಂದು ಗುರುತಿಸಲಾಯಿತು.

ಈ ಹಂತದಲ್ಲಿ ಮುಂದುವರೆದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದು, ಸಮಯ ನೀಡಲಾಯಿತು.

(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸಾ.ಸ.ಇ.ಓ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ
ಹೆಚ್.ಡಿ.ಕೋಟೆ.